# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | **1106** |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಪಿ ನಂಜುಂಡಿ ವಿಶ್ವಕರ್ಮ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 15.12.2023 |
| ಉತ್ತರಿಸುವ ಸಚಿವರು | ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಬ್ಬಿಣ ಮತ್ತು ಮರಗೆಲಸ ಮಾಡುವ ವಿಶ್ವಕರ್ಮರ ವೃತ್ತಿಗಳು, ತಂತ್ರಜ್ಞಾನ, ಯಂತ್ರ ಮತ್ತು ಆರ್ಥಿಕ ನೆರವಿಲ್ಲದೆ ಗ್ರಾಮಗಳಿಂದ ವಲಸೆ ಬಂದು ನಗರಗಳಲ್ಲಿ ಕೂಲಿಕೆಲಸ ಮಾಡುತ್ತಾ ತಮ್ಮ ಮೂಲ ವೃತ್ತಿಗಳಿಂದ ದೂರವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹಿಂದುಳಿದ ವರ್ಗಗಳ ವಿಶ್ವಕರ್ಮ ಸಮುದಾಯದ ಜನರ ಅಭಿವೃದ್ಧಿಗಾಗಿ ಸರ್ಕಾರದ ಆದೇಶ ಸಂಖ್ಯೆ:ಹಿಂವಕ 235 ಬಿಸಿಎ 2013 ದಿನಾಂಕ:03.02.2014 ರಂತೆ, ಕಂಪನಿ ಕಾಯ್ದೆ 1956 ರನ್ವಯ ದಿನಾಂಕ:28.02.2014 ರಂದು ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮವನ್ನು ಸ್ಥಾಪಿಸಲಾಗಿದೆ.<br><br>2023-24ನೇ ಸಾಲಿನ ಆಯವ್ಯಯದಲ್ಲಿ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮಕ್ಕೆ ರೂ.13.00 ಕೋಟಿಗಳ ಅನುದಾನವನ್ನು ಒದಗಿಸಲಾಗಿದ್ದು, ನಿಗಮದಿಂದ ಈ ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿ ಸಲಾಗುತ್ತಿದೆ.<br><br>1. ಸ್ವಯಂ ಉದ್ಯೋಗ ನೇರ ಸಾಲ ಯೋಜನೆ<br>2. ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆ<br>3. ಬ್ಯಾಂಕ್‌ಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗ ಸಹಾಯಧನ ಯೋಜನೆ<br>4. ಅರಿವು ಶೈಕ್ಷಣಿಕ ನೇರ ಸಾಲ/ನವೀಕರಣ ಯೋಜನೆ<br>5. ಗಂಗಾ ಕಲ್ಯಾಣ ನೀರಾವರಿ ಯೋಜನೆ<br>6. ಸ್ವಾವಲಂಬಿ ಸಾರಥಿ ಯೋಜನೆ<br>7. ವಿದೇಶಿ ವ್ಯಾಸಂಗ ಸಾಲ ಯೋಜನೆ<br>8. ಸ್ವಾತಂತ್ರ್ಯ ಅಮೃತ ಮುನ್ನಡೆ ಯೋಜನೆ<br><br>ಕಬ್ಬಿಣ ಮತ್ತು ಮರಗೆಲಸ ಮಾಡುವ ವಿಶ್ವಕರ್ಮರ ವೃತ್ತಿಗಳಲ್ಲಿ ತೊಡಗಿರುವವರು ಆಧುನಿಕ ತಂತ್ರಜ್ಞಾನಗಳನ್ನೊಳಗೊಂಡ ಯಂತ್ರಗಳನ್ನು ಖರೀದಿಸಿ, ಆ ಮೂಲಕ ಆಧುನಿಕ ಸ್ಪರ್ಧಾತ್ಮಕ ಮಾರುಕಟ್ಟೆಯ ಅವಶ್ಯಕತೆಗನು ಗುಣವಾಗಿ ಉತ್ಪಾದನಾ ಗುಣಮಟ್ಟವನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಿಗಮದಿಂದ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ ಮತ್ತು |

| | | |
|---|---|---|
| ಆ) | ಬಂದಿದ್ದಲ್ಲಿ, ಸರ್ಕಾರದಿಂದ ಯಾವ ರೀತಿಯ ನೆರವು ಒದಗಿಸಲಾಗುವುದು? | ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಈ ಯೋಜನೆಗಳ ಅನುಷ್ಠಾನದಿಂದ ವಿಶ್ವಕರ್ಮ ಸಮುದಾಯದವರು ತಮ್ಮ ವೃತ್ತಿಗಳಲ್ಲಿ ತೊಡಗಿಸಿಕೊಂಡು ಆರ್ಥಿಕಾಭಿವೃದ್ಧಿ ಹೊಂದಲು ಸಹಕಾರಿಯಾಗಿರುತ್ತದೆ. |

ಸಂಖ್ಯೆ:ಹಿಂವಕ 656 ಬಿಂಎಂಎಸ್ 2023

(**ಶಿವರಾಜ ಎಸ್. ತಂಗಡಗಿ**)
ಹಿಂದುಳಿದ ವರ್ಗಗಳ ಕಲ್ಯಾಣ
ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು